Akashvani: Bangalore
National Bulletin In Kannada
08.11.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
08.11.2026: 13.10hrs
****

ಮುಖ್ಯಾಂಶಗಳು :

1. ದೇಶದೆಲ್ಲೆಡೆ ದೀಪಾವಳಿ ಸಂಭ್ರಮ; ಕೃಷಿ ಪರಂಪರೆ, ಜನಪದ ಸಂಸ್ಕೃತಿಯ ಸೊಗಡಿನೊಂದಿಗೆ ಬೆಳಕಿನ ಹಬ್ಬ ಆಚರಣೆ
2. ದೇಶ ಕಾಯುವ ಭದ್ರತಾ ಸಿಬ್ಬಂದಿ ತಮ್ಮ ಕುಟುಂಬದ ಸದಸ್ಯರಿದ್ದಂತೆ - ದೀಪಾವಳಿ ಆಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅಭಿಮತ
3. ಇಂದು ಮಾಜಿ ಉಪಪ್ರಧಾನಿ ಲಾಲ್ ಕೃಷ್ಣ ಅಡ್ವಾಣಿ ಅವರ ೧೦೦ನೇ ಜನ್ಮದಿನ; ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಶುಭಾಶಯ
4. ಎಸಿಸಿ ಪುರುಷರ ಅಂಡರ್ ೧೯ ಏಷ್ಯಾಕಪ್ ಕ್ರಿಕೆಟ್; ಭಾರತ- ಪಾಕಿಸ್ತಾನ ನಡುವಿನ ಪಂದ್ಯ ಪ್ರಗತಿಯಲ್ಲಿ

****

ದೇಶಾದ್ಯಂತ ಇಂದು ದೀಪಾವಳಿ ಹಬ್ಬದ ಸಡಗರ. ಎಲ್ಲರ ಜೀವನದಲ್ಲಿ ಸುಖ, ಶಾಂತಿ, ಸಮೃದ್ಧಿ ಹಾಗೂ ಸಂತೋಷವನ್ನು ತರಲಿ ಎಂಬ ಆಶಯದೊಂದಿಗೆ ಸಂಭ್ರಮದಿಂದ ಈ ಹಬ್ಬವನ್ನು ಆಚರಿಸಲಾಗುಣತ್ತಿದೆ. ಕರ್ನಾಟಕದಲ್ಲಿ ದೀಪಾವಳಿ ಹಬ್ಬವು ಧಾರ್ಮಿಕ ಆಚರಣೆಯ ಜೊತೆಗೆ ಕೃಷಿ ಸಂಸ್ಕೃತಿ ಮತ್ತು ಜನಪದ ಪರಂಪರೆಯೊಂದಿಗೆ ಬೆಸೆದುಕೊಂಡಿದೆ. ವಿಶೇಷವಾಗಿ ದೀಪಾವಳಿಯ ಸಂದರ್ಭದಲ್ಲಿ ದನಕರುಗಳನ್ನು ಸಿಂಗರಿಸಿ ಪೂಜಿಸುವ ಸಂಪ್ರದಾಯ ಇಂದಿಗೂ ಜೀವಂತವಾಗಿದೆ. ಬಲಿಪಾಡ್ಯಮಿಯಂದು ರೈತರು ತಮ್ಮ ಕೃಷಿ ಉಪಕರಣಗಳು ಹಾಗೂ ಜಾನುವಾರುಗಳಿಗೆ ಪೂಜೆ ಸಲ್ಲಿಸಿ, ಉತ್ತಮ ಫಸಲು ಮತ್ತು ಸಮೃದ್ಧಿಗಾಗಿ ಪ್ರಾರ್ಥಿಸುತ್ತಾರೆ. ಕೆಲವು ಪ್ರದೇಶಗಳಲ್ಲಿ ಬಲೀಂದ್ರನನ್ನು ಆಹ್ವಾನಿಸುವ ಜನಪದ ಹಾಡುಗಳು ಮತ್ತು ಸಂಪ್ರದಾಯಬದ್ಧ ಆಚರಣೆಗಳು ಹಬ್ಬಕ್ಕೆ ವಿಶೇಷ ಮೆರುಗು ನೀಡುತ್ತವೆ. ಕರಾವಳಿ ಭಾಗದ ದೀಪಾವಳಿಯ ಆಚರಣೆಯಲ್ಲಿ ತುಳಸಿ

ಪೂಜೆಗೆ ಮಹತ್ವವಿದೆ. ಮಲೆನಾಡು ಮತ್ತು ಹಳೆಯ ಮೈಸೂರು ಭಾಗಗಳಲ್ಲಿಯೂ ಕುಲ ದೇವರ ಪೂಜೆ, ಅಭ್ಯಂಗ ಸ್ನಾನ ಹಾಗೂ ಬಲೀಂದ್ರ ಪೂಜೆ ಪ್ರಮುಖವಾಗಿವೆ. ಹೀಗೆ ಕರ್ನಾಟಕದ ಪ್ರಾದೇಶಿಕ ವೈವಿಧ್ಯ ಮತ್ತು ಪರಂಪರೆಯನ್ನು ಪ್ರತಿಬಿಂಬಿಸುವ ದೀಪಾವಳಿ, ನಾಡಿನ ಸಾಂಸ್ಕೃತಿಕ ಶ್ರೀಮಂತಿಕೆಗೆ ಸಾಕ್ಷಿಯಾಗಿದೆ.

****

ದೇಶದ ಗಡಿಗಳನ್ನು ಕಾಯುವ ಹಾಗೂ ದೇಶದೊಳಗೆ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಭದ್ರತಾ ಸಿಬ್ಬಂದಿ ತಮ್ಮ ಕುಟುಂಬದ ಸದಸ್ಯರಿದ್ದಂತೆ ಎಂದು ಯೋಧರನ್ನುದ್ದೇಶಿಸಿ ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಛತ್ತೀಸ್‌ಗಢದ ಬಸ್ತಾರ್‌ನಲ್ಲಿ ಭದ್ರತಾ ಸಿಬ್ಬಂದಿಯೊಂದಿಗೆ ದೀಪಾವಳಿ ಹಬ್ಬವನ್ನು ಆಚರಿಸಿ, ಮಾತನಾಡಿದ ಅವರು, ದೇಶದ ಒಳನಾಡು ಹಾಗೂ ವಿದೇಶಗಳಲ್ಲಿರುವ ಕೋಟ್ಯಂತರ ಭಾರತೀಯರು ಬೆಳಕಿನ ಹಬ್ಬ ದೀಪಾವಳಿಯನ್ನು ಸಂಭ್ರಮ ಮತ್ತು ಉತ್ಸಾಹದಿಂದ ಆಚರಿಸುತ್ತಿದ್ದಾರೆ ಎಂದು ತಿಳಿಸಿದರು. ರಾಷ್ಟ್ರದ ರಕ್ಷಣೆಗೆ ಸಮರ್ಪಿತರಾಗಿರುವ ವೀರ ಯೋಧರು ಮತ್ತು ಮಹಿಳಾ ಸಿಬ್ಬಂದಿಯೊಂದಿಗೆ ದೀಪಾವಳಿ ಆಚರಿಸುವ ಉದ್ದೇಶದಿಂದ ತಾವು ಬಸ್ತಾರ್‌ಗೆ ಆಗಮಿಸಿರುವುದಾಗಿ ಹೇಳಿದರು. ಒಂದು ಕಾಲದಲ್ಲಿ ನಕ್ಸಲಿಸಂನಿಂದ ಬಾಧಿತವಾಗಿದ್ದ ಬಸ್ತಾರ್ ಪ್ರದೇಶದಲ್ಲಿ ಇಂದು ಶಾಂತಿ ಮತ್ತು ಅಭಿವೃದ್ಧಿಯ ಹೊಸ ಯುಗ ಆರಂಭವಾಗಿದೆ. ಇದಕ್ಕೆ ಭದ್ರತಾ ಸಿಬ್ಬಂದಿಯ ತ್ಯಾಗ ಮತ್ತು ಸಮರ್ಪಣಾ ಮನೋಭಾವವೇ ಕಾರಣ ಎಂದು ಪ್ರಧಾನಿ ಶ್ಲಾಘಿಸಿದರು. ದಶಕಗಳಿಂದ ನಡೆಯುತ್ತಿರುವ ನಕ್ಸಲಿಸಂ ಮತ್ತು ಮಾವೋವಾದಿ ಹಿಂಸಾಚಾರದ ವಿರುದ್ಧದ ಹೋರಾಟದಲ್ಲಿ ದೇಶ ಮಹತ್ವದ ಮೈಲಿಗಲ್ಲು ಸಾಧಿಸಿರುವ ಹಿನ್ನೆಲೆಯಲ್ಲಿ ೨೦೨೫ರ ದೀಪಾವಳಿ ವಿಶೇಷ ಮಹತ್ವ ಪಡೆದಿದೆ ಎಂದು ಅವರು ಹೇಳಿದರು. ದೇಶದ ಪ್ರತಿಯೊಂದು ಜಿಲ್ಲೆಯೂ ನಕ್ಸಲಿಸಂನಿಂದ ಮುಕ್ತವಾಗಿರುವ ಸಂದರ್ಭದಲ್ಲಿ ಆಚರಿಸಲಾಗುತ್ತಿರುವ ಮೊದಲ ದೀಪಾವಳಿ ಇದಾಗಿದೆ. ನಕ್ಸಲೀಯರ ಹಿಂಸಾಚಾರದ ಭೀತಿಯಿಂದ ಲಕ್ಷಾಂತರ ಜನರು ಹೊರಬಂದಿದ್ದಾರೆ ಎಂದು ಪ್ರಧಾನಿ ಹೇಳಿದರು. ಭದ್ರತಾ ಪಡೆಗಳು ಹಾಗೂ ರಾಷ್ಟ್ರದ ರಕ್ಷಣೆಯಲ್ಲಿ ತೊಡಗಿರುವ ಇತರ ಸಿಬ್ಬಂದಿಯ ಧೈರ್ಯ, ಬದ್ಧತೆ ಮತ್ತು ತ್ಯಾಗದಿಂದ ಈ ಸಾಧನೆ ಸಾಧ್ಯವಾಗಿದೆ. ಅವರ ಅಮೂಲ್ಯ ಕೊಡುಗೆಯನ್ನು

ಗೌರವಿಸುವ ಸಲುವಾಗಿ ಅವರೊಂದಿಗೆ ದೀಪಾವಳಿ ಆಚರಿಸುತ್ತಿರುವುದಾಗಿ ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ಧ್ವನಿ; ಪ್ರಧಾನಿ ನರೇಂದ್ರ ಮೋದಿ (೨೬ ಸೆಕೆಂಡ್ಸ್)

****

ದೇಶದ ಯುವ ಪೀಳಿಗೆಗೆ ಯುದ್ಧ ಸ್ಮಾರಕಗಳು ಸ್ಫೂರ್ತಿ ನೀಡುತ್ತವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಸಿಕ್ಕಿಂನ ಶೆರಾಥಾಂಗ್ ಯುದ್ಧ ಸ್ಮಾರಕಕ್ಕೆ ಇಂದು ಭೇಟಿ ನೀಡಿ, ಅಲ್ಲಿ ನಿಯೋಜನೆಗೊಂಡಿರುವ ಯೋಧರೊಂದಿಗೆ ದೀಪಾವಳಿ ಆಚರಿಸಿದ ಅವರು ಸೇನಾ ಸಿಬ್ಬಂದಿಯನ್ನುದ್ದೇಶಿಸಿ ಮಾತನಾಡಿದರು. ದೇಶವು ಶಾಂತಿಯುತವಾಗಿ ದೀಪಾವಳಿಯನ್ನು ಆಚರಿಸುತ್ತಿದ್ದರೆ, ಅದಕ್ಕೆ ನಮ್ಮ ಸಶಸ್ತ್ರ ಪಡೆಗಳೇ ಕಾರಣ ಎಂದು ಭದ್ರತಾ ಪಡೆಗಳ ಶೌರ್ಯವನ್ನು ಸ್ಮರಿಸಿದರು. ದೇಶಕ್ಕಾಗಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಹುತಾತ್ಮ ಮತ್ತು ಯುದ್ಧ ವೀರರಿಗೆ ಯುದ್ಧ ಸ್ಮಾರಕವು ಒಂದು ಸೂಕ್ತ ಗೌರವದ ಸಂಕೇತವಾಗಿದೆ ಎಂದು ಸಚಿವ ರಾಜನಾಥ್ ಸಿಂಗ್ ಅಭಿಪ್ರಾಯಪಟ್ಟರು.

****

ಇಂದು ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಉಪಪ್ರಧಾನಿ ಲಾಲ್ ಕೃಷ್ಣ ಅಡ್ವಾಣಿ ಅವರ ೧೦೦ನೇ ಜನ್ಮದಿನ. ಈ ಸಂದರ್ಭದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಅಡ್ವಾಣಿ ಅವರಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಉಪರಾಷ್ಟ್ರಪತಿ, ಅಡ್ವಾಣಿ ಅವರ ದಶಕಗಳ ಸಾರ್ವಜನಿಕ ಸೇವೆ ಮತ್ತು ರಾಷ್ಟ್ರದ ಬಗೆಗಿನ ಬದ್ಧತೆಯು ಭಾರತದ ಪ್ರಜಾಪ್ರಭುತ್ವದ ಪಯಣದ ಪ್ರಮುಖ ಭಾಗವಾಗಿದೆ ಎಂದು ಹೇಳಿದ್ದಾರೆ. ಅವರು ಅಡ್ವಾಣಿ ಅವರಿಗೆ ಉತ್ತಮ ಆರೋಗ್ಯ, ಸಂತೋಷ ಮತ್ತು ಕ್ಷೇಮವನ್ನು ಹಾರೈಸಿದ್ದಾರೆ.ಸೈದ್ಧಾಂತಿಕ ಸ್ಪಷ್ಟತೆ, ಬೌದ್ಧಿಕ ತೀಕ್ಷ್ಣತೆ ಮತ್ತು ರಾಜಕೀಯ ಕ್ಷೇತ್ರದ ದೊಡ್ಡ ವರ್ಗವು ವರ್ಷಗಳಿಂದ ಪ್ರತಿಪಾದಿಸುತ್ತಿದ್ದ ಹುಸಿ ಜಾತ್ಯತೀತತೆಯನ್ನು ಅವರು ಪ್ರಶ್ನಿಸಿದ ರೀತಿ, ನಾಯಕನಾಗಿ ಅವರನ್ನು ಪ್ರತ್ಯೇಕಿಸುವ ಗುಣಗಳಾಗಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ. ಪ್ರಮುಖ ದಿನಪತ್ರಿಕೆಗಳಲ್ಲಿ ಲೇಖನಗಳ ಮೂಲಕ ತಮ್ಮ

ಗೌರವ ಸಮರ್ಪಿಸಿರುವ ಪ್ರಧಾನಿ, ರಾಜಕೀಯದ ಆಚೆಗೂ ಅಡ್ವಾಣಿಯವರ ಸರಳತೆ ಮತ್ತು ಪ್ರಾಮಾಣಿಕತೆಯನ್ನು ನೆನೆದಿದ್ದಾರೆ.

****

ಷಿಗಲ್ಲಾ ಸೋಂಕು ದೃಢಪಟ್ಟಿರುವ ಹಿನ್ನೆಲೆಯಲ್ಲಿ ಕೇರಳಂ ರಾಜ್ಯ ಆರೋಗ್ಯ ಇಲಾಖೆಯು ಮುನ್ನೆಚ್ಚರಿಕಾ ಕ್ರಮಗಳನ್ನು ತೀವ್ರಗೊಳಿಸಿದೆ. ತಿರುವನಂತಪುರಂ ಮತ್ತು ತ್ರಿಶೂರ್‌ನಲ್ಲಿ ತಲಾ ಒಂದು ಪ್ರಕರಣ ವರದಿಯಾಗಿದ್ದರೆ, ಮಲಪ್ಪುರಂ ಮತ್ತು ಕೋಯಿಕೋಡ್‌ನಲ್ಲಿ ನಿನ್ನೆ ತಲಾ ಮೂರು ಪ್ರಕರಣಗಳು ದೃಢಪಟ್ಟಿವೆ. ಇತ್ತೀಚಿನ ವರದಿಗಳ ಪ್ರಕಾರ, ಮಲಪ್ಪುರಂ ಜಿಲ್ಲೆಯಲ್ಲಿ ದೃಢಪಟ್ಟ ಷಿಗಲ್ಲಾ ಪ್ರಕರಣಗಳ ಒಟ್ಟು ಸಂಖ್ಯೆ ೮ಕ್ಕೆ ಏರಿದೆ. ರೋಗ ಹರಡುವಿಕೆಯನ್ನು ತಡೆಗಟ್ಟಲು ಕ್ವೋರಿನೇಷನ್ ಸೇರಿದಂತೆ ಮುನ್ನಚ್ಚರಿಕಾ ಕ್ರಮಗಳನ್ನು ವಹಿಸುವಂತೆ ಆರೋಗ್ಯ ಇಲಾಖೆ ಸೂಚಿಸಿದೆ.

****

ಇಸ್ರೇಲ್‌ನ ಮುಂದಿನ ಸರ್ಕಾರ ರಚಿಸುವ ಜವಾಬ್ದಾರಿಯನ್ನು ಮಾಜಿ ಸೇನಾ ಮುಖ್ಯಸ್ಥ ಹಾಗೂ ವಿರೋಧ ಪಕ್ಷದ ನಾಯಕ ಗಾಡಿ ಐಸೆನ್‌ಕೋಟ್ ಅವರಿಗೆ ವಹಿಸಲಾಗಿದೆ. ಅಧ್ಯಕ್ಷ ಐಸಾಕ್ ಹೆರ್ಜಾಗ್ ಈ ಘೋಷಣೆ ಮಾಡಿದ್ದಾರೆ. ೧೨೦ ಸದಸ್ಯರ ಸಂಸತ್ತಿನಲ್ಲಿ, ಐಸೆನ್‌ಕೋಟ್‌ಗೆ ೬೭ ಸಂಸದರು ಬೆಂಬಲ ಸೂಚಿಸಿದ್ದು, ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರಿಗೆ ೪೬ ಸದಸ್ಯರ ಬೆಂಬಲ ದೊರೆತಿದೆ. ಸರ್ಕಾರ ರಚಿಸಲು ಐಸೆನ್‌ಕೋಟ್ ಅವರಿಗೆ ೨೮ ದಿನಗಳ ಕಾಲಾವಕಾಶ ನೀಡಲಾಗಿದೆ. ನೆತನ್ಯಾಹು ನೇತೃತ್ವದ ಸರ್ಕಾರದಲ್ಲಿ ಸೇರುವುದಿಲ್ಲ ಎಂದು ಸ್ಪಷ್ಟಪಡಿಸಿರುವ ಐಸೆನ್‌ಕೋಟ್, ಗಾಜಾ ಯುದ್ಧ ನಿರ್ವಹಣೆಯ ವಿಚಾರದಲ್ಲಿ ನೆತನ್ಯಾಹು ಅವರನ್ನು ಟೀಕಿಸಿದ್ದಾರೆ. ಆದರೆ, ಪಕ್ಷಗಳ ನಡುವಿನ ಭಿನ್ನಾಭಿಪ್ರಾಯಗಳಿಂದ ಸರ್ಕಾರ ರಚನೆ ಸವಾಲಾಗುವ ಸಾಧ್ಯತೆಯಿದೆ.

****

ಒಮಾನ್‌ನಲ್ಲಿ ನಡೆಯುತ್ತಿರುವ ಎಸಿಸಿ ಪುರುಷರ ೧೯ ವರ್ಷದೊಳಗಿನವರ ಏಷ್ಯಾಕಪ್ ಕ್ರಿಕೆಟ್‌ನ, ಗ್ರೂಪ್ ಎ ಹಂತದ ಬಹುನಿರೀಕ್ಷಿತ ಪಂದ್ಯದಲ್ಲಿ ಭಾರತ, ಪಾಕಿಸ್ತಾನ ತಂಡಗಳು

ಮುಖಾಮುಖಿಯಾಗಿವೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ ತಂಡ, ಇತ್ತೀಚಿನ ವರದಿಯಂತೆ ೩೨.೧ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೫೪ ರನ್ ಮಾಡಿ ಆಡುತ್ತಿದೆ. ಈ ನಿರ್ಣಾಯಕ ಪಂದ್ಯದಲ್ಲಿ ಗೆದ್ದ ತಂಡವು, ಗುಂಪಿನಲ್ಲಿ ಅಗ್ರಸ್ಥಾನಕ್ಕೆ ಏರಲಿದ್ದು, ಸೆಮಿಫೈನಲ್ ಪ್ರವೇಶಿಸಲು ಸುಲಭವಾಗಲಿದೆ.

****

ಚೆನ್ನೈ ಓಪನ್ ಟೆನಿಸ್ ಟೂರ್ನಿಯ ಮಹಿಳಾ ಡಬಲ್ಸ್ ವಿಭಾಗದಲ್ಲಿ, ಭಾರತದ ವೈಷ್ಣವಿ ಅಡ್ಕರ್ ಮತ್ತು ರುತುಜಾ ಭೋಸಲೆ ಜೋಡಿ ಫೈನಲ್ ಪ್ರವೇಶಿಸುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ. ಈ ಜೋಡಿ ಇಂದು ಸಂಜೆ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಸ್ವಿಟ್ಜರ್‌ಲ್ಯಾಂಡ್‌ನ ನೈಮಾ ಕರಾಮೋಕೊ ಮತ್ತು ಸೈಮೊನಾ ವಾಲ್ಟರ್ಟ್ ಜೋಡಿಯನ್ನು ಎದುರಿಸಲಿದೆ. ಡಬ್ಲ್ಯುಟಿಎ ಟೂರ್‌ನ ಮುಖ್ಯ ಹಂತದ ಡಬಲ್ಸ್ ಫೈನಲ್ ಪ್ರವೇಶಿಸಿದ ಭಾರತದ ಮೊದಲ ಮಹಿಳಾ ಜೋಡಿ ಎಂಬ ಹೆಗ್ಗಳಿಕೆಗೆ ವೈಷ್ಣವಿ ಮತ್ತು ರುತುಜಾ ಪಾತ್ರರಾಗಿದ್ದಾರೆ. ಈ ಸಾಧನೆಯು ಭಾರತೀಯ ಮಹಿಳಾ ಟೆನ್ನಿಸ್ ಕ್ಷೇತ್ರಕ್ಕೆ ಮಹತ್ವದ ಮೈಲಿಗಲ್ಲಾಗಿದೆ.

****

ಸೆನೆಗಲ್‌ನಲ್ಲಿ ನಡೆಯುತ್ತಿರುವ ೨೦೨೬ರ ಡಾಕರ್ ಯೂತ್ ಒಲಿಂಪಿಕ್ಸ್ ಕ್ರೀಡಾಕೂಟದ ಮಹಿಳೆಯರ ೭೫ ಕೆ.ಜಿ. ಬೀಚ್ ಕುಸ್ತಿ ವಿಭಾಗದಲ್ಲಿ ಭಾರತದ ಕುಸ್ತಿಪಟು ತಾನ್ಯಾ ಬೆಳ್ಳಿ ಪದಕ ಗೆದ್ದಿದ್ದಾರೆ. ಫೈನಲ್ ಪಂದ್ಯದಲ್ಲಿ ಚೀನಾದ ಝಾವೊ ಮಿನ್ ವಿರುದ್ಧ ೧-೨ ಅಂಕಗಳ ಅಂತರದಿಂದ ಸೋಲು ಅನುಭವಿಸಿದ ಅವರು, ಆರಂಭದಲ್ಲಿ ಮುನ್ನಡೆ ಸಾಧಿಸಿದ್ದರೂ ಗೆಲುವು ದಾಖಲಿಸುವಲ್ಲಿ ವಿಫಲರಾದರು. ೨೦೨೬ರ ಡಾಕರ್ ಯೂತ್ ಒಲಿಂಪಿಕ್ಸ್‌ನಲ್ಲಿ ಇದೇ ಮೊದಲ ಬಾರಿಗೆ ಬೀಚ್ ಕುಸ್ತಿ ಸ್ಪರ್ಧೆಯನ್ನು ಸೇರ್ಪಡೆಗೊಳಿಸಲಾಗಿದೆ. ವೇಗದ ಈ ಕ್ರೀಡೆಯನ್ನು ಮರಳಿನ ಮೇಲೆ ಏಳು ಮೀಟರ್ ವ್ಯಾಸದ ವೃತ್ತಾಕಾರದ ಅಂಕಣದಲ್ಲಿ ಆಡಲಾಗುತ್ತದೆ. ಪ್ರತಿ ಪಂದ್ಯವು ಗರಿಷ್ಠ ಮೂರು ನಿಮಿಷಗಳ ಕಾಲ ನಡೆಯುತ್ತದೆ.

****

ಕೇರಳಂ, ಮಾಹೆ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಾಲ್‌ನಲ್ಲಿ ಇಂದು ಭಾರಿ ಮಳೆಯಾಗುವ ಸಂಭವವಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ಮತ್ತು ನಾಳೆ ಆಂಧ್ರಪ್ರದೇಶ ಮತ್ತು ಲಕ್ಷದ್ವೀಪದಲ್ಲಿ ಗುಡುಗು ಸಹಿತ ಮಳೆ, ಮಿಂಚು ಮತ್ತು ಬಿರುಗಾಳಿ ಬೀಸುವ ಸಾಧ್ಯತೆಯಿದೆ ಎಂದು ಇಲಾಖೆ ಸೂಚಿಸಿದೆ.

****